# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:** | **399** |
| **ಸದಸ್ಯರ ಹೆಸರು:** | ಶ್ರೀಮತಿ ಭಾರತಿ ಶೆಟ್ಟಿ |
| **ಉತ್ತರಿಸಬೇಕಾದ ದಿನಾಂಕ:** | 13.08.2025. |
| **ಉತ್ತರಿಸಬೇಕಾದ ಸಚಿವರ ಹೆಸರು:** | ಸಾರಿಗೆ ಮತ್ತು ಮುಜರಾಯಿ ಸಚಿವರು |

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ದೇವಾಲಯಗಳಲ್ಲಿ ಪೂಜಾ ಕೈಂಕರ್ಯಗಳನ್ನು ಕಲ್ಪಿಸಲು ಆಗಮ ಶಿಕ್ಷಣದಲ್ಲಿ ಅನುಸರಿಸುತ್ತಿರುವ ಭಾಷಾ ಮಾಧ್ಯಮ ಯಾವುದು: | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ರ ಸೆಕ್ಷನ್ 58 ರಲ್ಲಿ ಕಲ್ಪಿಸಿರುವಂತೆ ಧಾರ್ಮಿಕ ಸಂಸ್ಥೆಗೆ ಸೂಕ್ತವಾದ ಸಂಪ್ರದಾಯ, ಆಚರಣೆ, ಸಮಾರಂಭ ಮತ್ತು ಪದ್ಧತಿಗಳಲ್ಲಿ ಹಸ್ತಕ್ಷೇಪವನ್ನು ಮಾಡದೇ ಮತ್ತು ಅವುಗಳನ್ನು ಪಾಲಿಸತಕ್ಕದ್ದರಿಂದ ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳಲ್ಲಿ ಹಿಂದಿನಿಂದಲೂ ನಡೆದು ಬರುತ್ತಿರುವ ರೂಢಿ, ಸಂಪ್ರದಾಯ ಪದ್ಧತಿಗಳಿಗೆ ಅನುಸಾರವಾಗಿ ಮತ್ತು ರೂಢಿ ಮತ್ತು ಸಂಪ್ರದಾಯಗಳಿಗೆ ಯಾವುದೇ ಭಾದಕ ವಾಗದಂತೆ ಕ್ರಮವಹಿಸ ಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಆಗಮ ಶಿಕ್ಷಣದಲ್ಲಿ ಸಂಸ್ಕೃತ ಭಾಷೆ (ದೇವನಾಗರಿ ಲಿಪಿ) ಯಲ್ಲಿ ಗ್ರಂಥಗಳು ಇರುವುದರಿಂದ ಸಂಸ್ಕೃತ ಭಾಷೆ ಹಾಗೂ ಕನ್ನಡ ಭಾಷೆಯಲ್ಲಿ ಆಗಮ ಶಿಕ್ಷಣ ಪಾಠ ಪ್ರವಚನಗಳನ್ನು ನಡೆಸಿಕೊಂಡು ಬರಲಾಗುತ್ತಿದೆ.<br><br>ಆಗಮ ಶಿಕ್ಷಣವನ್ನು ಬೋಧಿಸುವ ಸಂದರ್ಭದಲ್ಲಿ ಸಂಸ್ಕೃತ ಪಾಠಶಾಲೆಯ ಬೋಧಕ ವರ್ಗದ ಅಧ್ಯಾಪಕರು/ ಪ್ರಾಧ್ಯಾಪಕರುಗಳು ಆಗಮ ಶಿಕ್ಷಣಾರ್ಥಿ ಗಳಿಗೆ ಕನ್ನಡದಲ್ಲಿ ಅರ್ಥಗಳನ್ನು ಹೇಳಿ ಬೋಧನೆಯ ಸಂದರ್ಭದಲ್ಲಿ ಕನ್ನಡವನ್ನು ಸಹ ಹೇಳಿ ಕೊಡಲಾಗುತ್ತಿದ್ದು, ವಿದ್ಯಾರ್ಥಿಗಳು ಪರೀಕ್ಷೆಯನ್ನು ಕನ್ನಡ ಮತ್ತು ಸಂಸ್ಕೃತ ಎರಡು ಭಾಷೆಗಳಲ್ಲಿ ಬರೆಯಲು ಅವಕಾಶ ಕಲ್ಪಿಸಲಾಗಿದೆ.<br><br>ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ದೇವಾಲಯಗಳಲ್ಲಿ ಪೂಜಾ ಕೈಂಕರ್ಯಗಳನ್ನು ಕಲ್ಪಿಸಲು ಆಗಮ ಶಿಕ್ಷಣದಲ್ಲಿ ಸಂಸ್ಕೃತ ಮತ್ತು ಕನ್ನಡ ಭಾಷಾ ಮಾಧ್ಯಮವನ್ನು ಅನುಸರಿಸಲಾಗುತ್ತಿದೆ. |
| (ಆ) | ಇದನ್ನು ಸಂಪೂರ್ಣವಾಗಿ ಕನ್ನಡದಲ್ಲಿ ಕಲಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುತ್ತದೆ: | ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ 2 ಸರ್ಕಾರಿ ಆಗಮ ಪಾಠಶಾಲೆಗಳು ಹಾಗೂ 5 ಅನುದಾನಿತ ಆಗಮ ಪಾಠಶಾಲೆಗಳಿದ್ದು, ವಿವರಗಳು ಈ ಕೆಳಕಂಡಂತಿದೆ. ಇದಲ್ಲದೆ ಇಲಾಖೆಯಿಂದ ಮಾನ್ಯತೆ ಪಡೆದಿರುವ ಒಟ್ಟು 28 ಪಾಠಶಾಲೆಗಳಿದ್ದು, ವಿವರಗಳನ್ನು **ಅನುಬಂಧ**ದಲ್ಲಿ ಲಗತ್ತಿಸಿದೆ.<br><br>ಈ ಪಾಠ ಶಾಲೆಗಳ ಮೂಲಕ ಅರ್ಚನ ವೃತ್ತಿಯನ್ನು ಕೈಗೊಳ್ಳುವುದಕ್ಕೆ ಅಗತ್ಯವಿರುವ ಆಗಮ ಶಿಕ್ಷಣದ ಪಾಠ ಪ್ರವಚನಗಳನ್ನು ವಿದ್ಯಾರ್ಥಿಗಳಿಗೆ ಅರ್ಥ ವಾಗುವಂತೆ |

ಕನ್ನಡದಲ್ಲಿಯೇ ಬೋಧಿಸಲಾಗುತ್ತಿದೆ.

| ಕ್ರ. ಸಂ | ಪಾಠಶಾಲೆಗಳ ವಿವರ |
|---|---|
| **ಸರ್ಕಾರಿ ಪಾಠಶಾಲೆಗಳು** | |
| 1 | ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು |
| 2 | ಸರ್ಕಾರಿ ಸಂಸ್ಕೃತ ಕಾಲೇಜು, ಮೇಲುಕೋಟೆ. |
| **ಅನುದಾನಿತ ಪಾಠಶಾಲೆಗಳು** | |
| 1 | ಶ್ರೀ ಕಾಲಭೈರವೇಶ್ವರ ಸಂಸ್ಕೃತ ವೇದ ಆಗಮ ಮಹಾವಿದ್ಯಾಲಯ. ಶ್ರೀ ಆದಿಚುಂಚನಗಿರಿಕ್ಷೇತ್ರ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ. |
| 2 | ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿ ಸಂಸ್ಕೃತ ವೇದ ಜ್ಯೋತಿಷ್ಯ ಮತ್ತು ವೀರಶೈವಾಗಮ ಪಾಠಶಾಲೆ, ಎಡೆಯೂರು |
| 3 | ಶ್ರೀ ಮಹದೇಶ್ವರ ವೇದ ಮತ್ತು ಆಗಮ ಪಾಠಶಾಲೆ. ಶ್ರೀ ಸಾಲೂರು ಮಠ, ಮಹದೇಶ್ವರ ಬೆಟ್ಟ. |
| 4 | ಶ್ರೀ ಮೇಧಾ ದಕ್ಷಿಣಾ ಮೂರ್ತಿ ವೇದ ಭವನ ಸಂಸ್ಕೃತ ಮಹಾವಿದ್ಯಾಲಯ, ಗೋಕರ್ಣ. |
| 5 | ಪೂರ್ಣಪ್ರಜ್ಞ ವಿದ್ಯಾಪೀಠ ಸಂಸ್ಕೃತ ಸ್ನಾತಕ ಸ್ನಾತಕೋತ್ತರ ಅಧ್ಯಯನ ಕೇಂದ್ರ, ಬೆಂಗಳೂರು. |

ಆಗಮ ಶಿಕ್ಷಣದ ಪಾಠ ಪ್ರವಚನಗಳು ಅರ್ಥವಾಗುವಂತೆ ಕನ್ನಡದಲ್ಲಿಯೇ ಬೋಧಿಸ ಲಾಗುತ್ತಿರುತ್ತದೆ ಹಾಗೆಯೇ ಪರೀಕ್ಷೆ ಪಡೆಯುವ ವಿದ್ಯಾರ್ಥಿಗಳು ಕನ್ನಡ ಭಾಷೆ / ಕನ್ನಡ ಲಿಪಿಯಲ್ಲಿಯೇ ಉತ್ತರಿಸಲು ಅನುಕೂಲ ವಾಗುವಂತೆ ವ್ಯವಸ್ಥೆ ಕಲ್ಪಿಸಲಾಗಿದೆ. ಶೇಕಡ 90ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆಗಮ ಪರೀಕ್ಷೆಗಳನ್ನು ಕನ್ನಡದಲ್ಲಿಯೇ ಬರೆಯುತ್ತಾರೆ.

ಸರ್ವಾಗಮ ಪ್ರವರ ಮತ್ತು ಪ್ರವೀಣ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸುವ ಸಲುವಾಗಿ ಸುಮಾರು 18 ವರ್ಷಗಳು ಕಳೆದ ನಂತರ "**ಆಗಮ ಘಟಿಕೋತ್ಸವ**" ಕಾರ್ಯಕ್ರಮವನ್ನು ನಡೆಸಲು ಉದ್ದೇಶಿಸಿ ಪ್ರಥಮ ಹಂತದಲ್ಲಿ 2019-20, 2020-21 ಮತ್ತು 2021-22 ಹಾಗೂ 2022-23 ಮತ್ತು 2023-24ನೇ ಸಾಲುಗಳ ಸರ್ವಾಗಮ ಪ್ರವರ ಮತ್ತು ಪ್ರವೀಣ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸುವ ಸಂಬಂಧ **ದಿನಾಂಕ:21.02.2025**ರಂದು ಮೈಸೂರಿನ ಜಗನ್ ಮೋಹನ ಅರಮನೆಯ ಸಭಾಂಗಣದಲ್ಲಿ ನಡೆಸಿದ **ಘಟಿಕೋತ್ಸವ ಕಾರ್ಯಕ್ರಮವನ್ನು** ಆಯೋಜಿಸಿ ಸುಮಾರು 1700 ವಿದ್ಯಾರ್ಥಿಗಳಿಗೆ ಹಾಗೂ ಈ ಹಿಂದಿನ ಯಾವುದೇ ಸಾಲುಗಳಲ್ಲಿ ಸರ್ವಾಗಮ ಪ್ರವರ / ಪ್ರವೀಣ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲು ಕ್ರಮವಹಿಸಲಾಗಿರುತ್ತದೆ.

ಮುಂದುವರೆದು, ಬೆಂಗಳೂರು ನಗರ, ಬಸವನಗುಡಿಯ ಶ್ರೀ ಕಾರಂಜಿ ಆಂಜನೇಯಸ್ವಾಮಿ ದೇವಾಲಯದ ಆವರಣದಲ್ಲಿರುವ ಶ್ರೀ ಶೃಂಗೇರಿ ಶಾರದಾ ಕಲ್ಯಾಣ ಮಂಟಪದಲ್ಲಿ ದಿನಾಂಕ: 19.07.2025 ರಂದು ನಡೆಸಿದ "**ಆಗಮ ಘಟಿಕೋತ್ಸವ**" ಕಾರ್ಯಕ್ರಮದಲ್ಲಿ

| | | |
|---|---|---|
| | | ಸುಮಾರು 2602 ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲು ಕ್ರಮವಹಿಸಲಾಗಿರುತ್ತದೆ. ಈ ರೀತಿಯಾಗಿ ರಾಜ್ಯದ ದೇವಾಲಯಗಳಲ್ಲಿ ಪೂಜಾ ಕೈಂಕರ್ಯಗಳನ್ನು ಕಲಿಸಲು ಆಗಮ ಶಿಕ್ಷಣದಲ್ಲಿ ವಿದ್ಯಾರ್ಥಿಗಳು ಕನ್ನಡ ಭಾಷೆಯಲ್ಲಿ ಕಲಿಯಲು ಪ್ರೋತ್ಸಾಹ ನೀಡಲಾಗುತ್ತಿದೆ. |
| (ಇ) | ರಾಜ್ಯದಲ್ಲಿರುವ ದೇವಾಲಯಗಳ ಒಳಗೆ ಮತ್ತು ಹೊರಗೆ ಪರಿಸರವನ್ನು ಸಂಪೂರ್ಣವಾಗಿ ಸ್ವಚ್ಛವಾಗಿಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿರುವ ಅಧಿಸೂಚಿತ/ಘೋಷಿತ ದೇವಾಲಯ/ ಸಂಸ್ಥೆಗಳ ಒಳಗೆ ಮತ್ತು ಹೊರಗೆ ಪರಿಸರವನ್ನು ಸಂಪೂರ್ಣವಾಗಿ ಸ್ವಚ್ಛವಾಗಿಡಲು ಧಾರ್ಮಿಕ ದತ್ತಿ ಇಲಾಖೆ ವತಿಯಿಂದ ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br>1) ಸ್ವಚ್ಛ ಮಂದಿರ ಅಭಿಯಾನ ಯೋಜನೆಯನ್ನು ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಬರುವ ರಾಜ್ಯದ ಸಮೂಹ 'ಎ' , 'ಬಿ' ಮತ್ತು 'ಸಿ' ಪ್ರವರ್ಗದ ದೇವಾಲಯಗಳಲ್ಲಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 83 ಮುಅಬಿ 2015, ದಿನಾಂಕ:29.08.2015ರ ಸುತ್ತೋಲೆಯನ್ನು ಹೊರಡಿಸಿರುತ್ತದೆ.<br>2) ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಬರುವ ಎಲ್ಲಾ ಅಧಿಸೂಚಿತ ಸಂಸ್ಥೆಗಳಲ್ಲಿ ಸ್ವಚ್ಛ ಮಂದಿರ ಅಭಿಯಾನ ಯೋಜನೆಯನ್ನು ಅನುಷ್ಠಾನ ಗೊಳಿಸುವ ಬಗ್ಗೆ ಧಾರ್ಮಿಕ ದತ್ತಿ ಆಯುಕ್ತರ ಕಛೇರಿಯಿಂದ ಸುತ್ತೋಲೆ ಸಂಖ್ಯೆ:ಎಡಿಎಂ-11 ಸಿಆರ್-219/2014-15 ದಿನಾಂಕ:10.04.2019ರ ಸುತ್ತೋಲೆಯನ್ನು ಹೊರಡಿಸಲಾಗಿದೆ.<br>3) ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿರುವ ದೇವಾಲಯಗಳಿಂದ, ಛತ್ರಗಳಿಂದ ಉತ್ಪತ್ತಿಯಾಗುವ ಘನ ತ್ಯಾಜ್ಯಗಳನ್ನು ವೈಜ್ಞಾನಿಕವಾಗಿ ನಿರ್ವಹಣೆ ಮಾಡುವ ಸಂಬಂಧ ಧಾರ್ಮಿಕ ದತ್ತಿ ಆಯುಕ್ತರ ಕಛೇರಿಯಲ್ಲಿ Project management unit (PMU) ಘಟಕವೊಂದನ್ನು ಸ್ಥಾಪಿಸಿ, ತಜ್ಞರನ್ನು ಒಳಗೊಂಡ ತಂಡದಿಂದ ಪ್ರಥಮ ಹಂತದಲ್ಲಿ ಇಲಾಖೆಗೆ ಸೇರಿದ ಪ್ರಮುಖ 25 ದೇವಾಲಯಗಳನ್ನು ಆಯ್ಕೆ ಮಾಡಿಕೊಂಡು ಘನ ಮತ್ತು ದ್ರವ ತ್ಯಾಜ್ಯ ಘಟಕಗಳನ್ನು ಸ್ಥಾಪಿಸಲು ಸ್ಥಳ ಗುರುತಿಸಿಕೊಂಡು ತ್ಯಾಜ್ಯ ವಿಲೇವಾರಿಯನ್ನು ವೈಜ್ಞಾನಿಕವಾಗಿ ನಿರ್ವಹಿಸಲು ಕ್ರಮವಹಿಸಲಾಗಿರುತ್ತದೆ<br>4) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 09.06.2025ರಂದು ನಡೆದ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಟ್ಟುನಿಟ್ಟಾಗಿ ಸೂಚನೆ ನೀಡಿ ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ದೇವಸ್ಥಾನಗಳಲ್ಲಿ ನೀರಿನ ಬಾಟಲ್ ಸೇರಿದಂತೆ ಎಲ್ಲಾ ರೀತಿಯ ಪ್ಲ್ಯಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ 2025ನೇ ಆಗಸ್ಟ್ 15 ರಿಂದ ಕಡ್ಡಾಯವಾಗಿ ನಿಷೇಧಿಸಲು ಸೂಚಿಸಿರುವಂತೆ ಧಾರ್ಮಿಕ ದತ್ತಿ ಆಯುಕ್ತರ ಕಛೇರಿಯಿಂದ ದಿನಾಂಕ:11.06.2025ರ ಸುತ್ತೋಲೆಯನ್ನು ಹೊರಡಿಸಿ ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಅದರಂತೆ ಇಲಾಖೆಯ ದೇವಾಲಯಗಳಲ್ಲಿ ಪ್ಲ್ಯಾಸ್ಟಿಕ್ ನಿಷೇಧ ಮತ್ತು ಸ್ವಚ್ಛತೆ ನಿರ್ವಹಣೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. |

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು